C.Misc. 373/2022
RW-1

ದಿನಾಂಕ -25.07.2025

ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**- ಮುಖ್ಯ ವಿಚಾರಣೆ - ಎದುರುದಾರರ ಪರ ಶ್ರೀ ಜಿ.ಎಂ.ಎಸ್. ವಕೀಲರ ಪರ ಶ್ರೀ ಜಿ.ವಿ.ಎಸ್. ವಕೀಲರಿಂದ -**

ನಾನು ಈ ಕೇಸಿನ ಎದುರುದಾರರ ಇಲಾಖೆಯಲ್ಲಿ ಎ.ಇ. ಎಂದು ಕೆಲಸ ನಿರ್ವಹಿಸುತ್ತಿದ್ದು, ನಾನು ನನ್ನ ಮುಖ್ಯವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸರಿ ಇರುತ್ತವೆ.

ನನ್ನ ಸಾಕ್ಷಿಗೆ ಬೆಂಬಲಿತವಾಗಿ, ಅರ್ಜಿಯ 2 ನೇ ಎದುರುದಾರರು ನನ್ನ ಹೆಸರಿಗೆ ನೀಡಿರುವ ಅಧಿಕಾರ ಪತ್ರ ಹಾಜರುಪಡಿಸಿದ್ದು, ಅದನ್ನು ನಿ.ಆರ್.-1 ಎಂದು, ಅರ್ಜಿದಾರರಿಗೆ ನಮ್ಮ ಇಲಾಖೆಯಿಂದ ಪರಿಹಾರವೆಂದು ಹಣ ಪಾವತಿ ಮಾಡಿದ ಬಗ್ಗೆ ಇರುವ ಒಂದು ದಾಖಲೆಯ ನಕಲು ಪ್ರತಿ ಹಾಜರುಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿ.ಆರ್-2 ಎಂದು, ದಿಃ 04.12.2018 ರಂದು ಚಿತ್ರದುರ್ಗ ಜಿಲ್ಲಾಧಿಕಾರಿಗಳು ಹೊರಡಿಸಿದ ಆದೇಶದ ನಕಲು ದೃಢೀಕೃತ ಪ್ರತಿ ಹಾಜರುಪಡಿಸಿದ್ದು, ಅದನ್ನು ನಿ.ಆರ್.3 ಎಂದು ಗುರುತಿಸಲಾಯಿತು.

ಮೇಲಿನ ನನ್ನ ಸಾಕ್ಷಿಯನ್ನು ಪರಿಗಣಿಸಿ ಅರ್ಜಿದಾರರು ನಮ್ಮ ವಿರುದ್ಧ ಸಲ್ಲಿಸಿರುವ ಅರ್ಜಿಯನ್ನು ವಜಾಗೊಳಿಸಲು ಕೋರುತ್ತೇನೆ.

**- ಪಾಟೀ ಸವಾಲು - ಅರ್ಜಿದಾರರ ಪರ ಶ್ರೀ ಆರ್.ಬಿ. ವಕೀಲರಿಂದ -**

ಅರ್ಜಿದಾರರು ಮತ್ತು ಅವರ ಪರ ವಕೀಲರು ಗೈರು ಹಾಜರಿದ್ದು, ನ್ಯಾಯಯುತ ದೃಷ್ಟಿಯಿಂದ ಒಂದು ಕಾಲಾವಕಾಶ ನೀಡಿ ಪಾಟೀ ಸವಾಲನ್ನು ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಿದೆ)

ಓದಿ ಹೇಳಿ ಕೇಳಿ ಸರಿ ಇದೆ.

1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,

ಚಿತ್ರದುರ್ಗ.